**All India Radio: Bangalore**
**National Bulletins In Kannada**
**05.08.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**05.08.2025 / 19.35 hrs**
**<><*<><>*><>**

**ಮುಖ್ಯಾಂಶಗಳು**

**೧. ಉತ್ತರಕಾಶಿಯಲ್ಲಿ ಮೇಘಸ್ಫೋಟ; ಕೊಚ್ಚಿಹೋದ ಧರಾಲಿ ಗ್ರಾಮ; ನಾಲ್ಕು ಸಾವು; ೬೦ ಕ್ಕೂ ಹೆಚ್ಚು ಮಂದಿ ನಾಪತ್ತೆ**

**೨. ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಆರು ತಿಂಗಳ ಅವಧಿಗೆ ವಿಸ್ತರಿಸುವ ಶಾಸನಬದ್ಧ ನಿರ್ಣಯಕ್ಕೆ ಸಂಸತ್ತು ಅನುಮೋದನೆ**

**೩. ಸಂಸತ್ತಿನ ಉಭಯ ಸದನಗಳಲ್ಲಿ ಮುಂದುವರೆದ ವಿರೋಧ ಪಕ್ಷಗಳ ಪ್ರತಿಭಟನೆ; ಕಲಾಪ ನಾಳೆಗೆ ಮುಂದೂಡಿಕೆ**

**೪. ಭಾರತ - ಫಿಲಿಫೈನ್ಸ್ ನಡುವೆ ರಕ್ಷಣೆ, ವಿಜ್ಞಾನ ಸೇರಿದಂತೆ ಒಂಬತ್ತು ಒಪ್ಪಂದಗಳ ವಿನಿಮಯ**

**೫. ರಷ್ಯಾದೊಂದಿಗೆ ಕಚ್ಚಾ ತೈಲ ವ್ಯಾಪಾರ; ಭಾರತದ ಮೇಲಿನ ಅಮೆರಿಕಾದ ತೆರಿಗೆ ಬೆದರಿಕೆಯನ್ನು ವಿರೋಧಿಸಿದ ರಷ್ಯಾ**

**<><*<><>*><>**

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಧರಾಲಿ ಪ್ರದೇಶದಲ್ಲಿ ಸಂಭವಿಸಿದ ಮೇಘಸ್ಫೋಟದಲ್ಲಿ ನಾಲ್ಕು ಮಂದಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಖೀರ್ ಗಂಗಾ ನದಿಯ ಮೇಲ್ದಂಡೆ ಪ್ರದೇಶದಲ್ಲಿ ಮೇಘಸ್ಫೋಟಗೊಂಡು, ಧರಾಲಿ ಗ್ರಾಮದಲ್ಲಿ ಪ್ರವಾಹ ಉಂಟಾಗಿದೆ. ಹಲವು ಮನೆ, ಹೋಟೆಲ್, ಅಂಗಡಿಗಳು ಕೊಚ್ಚಿ ಹೋಗಿದ್ದು, ೬೦ಕ್ಕೂ ಹೆಚ್ಚು ಮಂದಿ ಕಾಣೆಯಾಗಿದ್ದಾರೆ. ವಿಪತ್ತು ನಿರ್ವಹಣಾ ತಂಡಗಳು, ಸ್ಥಳದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿವೆ. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಘಟನೆಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ.  ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಜಿಲ್ಲಾಡಳಿತ, ಭಾರತೀಯ ಸೇನೆ, ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳು ಪೀಡಿತ ಪ್ರದೇಶಗಳಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿವೆ ಎಂದು ಅವರು ಹೇಳಿದ್ದಾರೆ. ಜನರನ್ನು ಆದ್ಯತೆಯ ಆಧಾರದ ಮೇಲೆ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗುತ್ತಿದೆ ಮತ್ತು ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಆಡಳಿತವು ಸಂಪೂರ್ಣ ಜಾಗರೂಕವಾಗಿದೆ ಮತ್ತು ಪೀಡಿತ ನಾಗರಿಕರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರಾಖಂಡದ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತನಾಡಿ ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ರಾಜ್ಯ ಸರ್ಕಾರದ ಮೇಲ್ವಿಚಾರಣೆಯಲ್ಲಿ ರಕ್ಷಣಾ ತಂಡಗಳು ಸಾಧ್ಯವಿರುವ ಎಲ್ಲ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದ್ದಾರೆ. ಮೇಘಸ್ಫೋಟ ಘಟನೆಯಲ್ಲಿ ಹಾನಿಗೊಳಗಾದ ಜನರಿಗೆ ಪ್ರಧಾನಿ ಸಹಾನುಭೂತಿ ವ್ಯಕ್ತಪಡಿಸಿದ್ದಾರೆ. ಹಠಾತ್ ಪ್ರವಾಹ ಘಟನೆಯ ಕುರಿತು ಗೃಹ ಸಚಿವ ಅಮಿತ್ ಶಾ ಇಂದು ಉತ್ತರಾಖಂಡದ ಮುಖ್ಯಮಂತ್ರಿಯೊಂದಿಗೆ ಮಾತನಾಡಿ ಮಾಹಿತಿ ಸಂಗ್ರಹಿಸಿದರು. ಸಾಮಾಜಿಕ ಜಾಲತಾಣದಲ್ಲಿ ಅವರು, ಹತ್ತಿರದ ಮೂರು ಇಂಡೋ ಟಿಬೆಟಿಯನ್ ಗಡಿ ಪೊಲೀಸ್ ತಂಡಗಳು ಮತ್ತು ನಾಲ್ಕು ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ ತಂಡಗಳನ್ನು ಸ್ಥಳಕ್ಕೆ ರಕ್ಷಣಾ ಕಾರ್ಯಾಚರಣೆಗೆ ರವಾನಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಇದೇ ೧೩ ರಿಂದ ಜಾರಿಗೆ ಬರುವಂತೆ ಆರು ತಿಂಗಳ ಅವಧಿಗೆ ವಿಸ್ತರಿಸುವ ಕುರಿತಾದ ಶಾಸನಬದ್ಧ ನಿರ್ಣಯಕ್ಕೆ ಸಂಸತ್ತು ಅನುಮೋದನೆ ನೀಡಿದೆ. ರಾಜ್ಯಸಭೆ ಇಂದು ಧ್ವನಿ ಮತದೊಂದಿಗೆ

ಶಾಸನಬದ್ಧ ನಿರ್ಣಯವನ್ನು ಅಂಗೀಕರಿಸಿತು. ಕಳೆದ ವಾರ ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ವಿಸ್ತರಿಸುವ ಕುರಿತಾದ ಶಾಸನಬದ್ಧ ನಿರ್ಣಯಕ್ಕೆ ಲೋಕಸಭೆ ಈಗಾಗಲೇ ಅನುಮೋದನೆ ನೀಡಿದೆ.

೨೦೨೫ ರ ಫೆಬ್ರುವರಿ ೧೩ ರಂದು ಮಣಿಪುರದಲ್ಲಿ ಹೇರಲಾದ ರಾಷ್ಟ್ರಪತಿ ಆಳ್ವಿಕೆಯನ್ನು ವಿಸ್ತರಿಸಲು ಸದನದ ಅನುಮೋದನೆ ಕೋರಿ ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತ್ಯಾನಂದ ರೈ ನಿರ್ಣಯವನ್ನು ಮಂಡಿಸಿದರು. ನಿರ್ಣಯದ ಮೇಲಿನ ಚರ್ಚೆಗೆ ಉತ್ತರಿಸಿದ ನಿತ್ಯಾನಂದ ರೈ, ರಾಷ್ಟ್ರಪತಿ ಆಳ್ವಿಕೆ ಹೇರಿದ ನಂತರ, ಕೇವಲ ಒಂದು ಹಿಂಸಾಚಾರ ಘಟನೆ ನಡೆದಿದ್ದು, ಅದರಲ್ಲಿ ಒಬ್ಬ ವ್ಯಕ್ತಿ ಸಾವನ್ನಪ್ಪಿದ್ದಾನೆ. ರಾಜ್ಯದಲ್ಲಿ ಕಳೆದ ನಾಲ್ಕು ತಿಂಗಳಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಈಶಾನ್ಯ ರಾಜ್ಯದ ಅಭಿವೃದ್ಧಿಗೆ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

**<><*<><>*><>**

ಬಿಹಾರದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯಕ್ರಮದ ಕುರಿತು ವಿರೋಧ ಪಕ್ಷಗಳ ಪ್ರತಿಭಟನೆಯಿಂದ ಸಂಸತ್ತಿನ ಉಭಯ ಸದನಗಳ ಕಲಾಪಗಳಿಗೆ ಅಡ್ಡಿ ಉಂಟಾಯಿತು. ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಇತರ ವಿಷಯಗಳ ಕುರಿತು ಚರ್ಚೆಗೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿದ್ದವು. ಲೋಕಸಭೆ ಮತ್ತು ರಾಜ್ಯಸಭೆ ಇಂದು ಒಂದು ಬಾರಿ ಕಲಾಪಗಳ ಮುಂದೂಡಿ, ನಂತರ ದಿನದ ಮಟ್ಟಿಗೆ ಮುಂದೂಡಲಾಯಿತು. ಮಧ್ಯಾಹ್ನ ೨ ಗಂಟೆಗೆ ಮೊದಲ ಮುಂದೂಡಿಕೆಯ ನಂತರ ಲೋಕಸಭೆ ಸಭೆ ಸೇರಿದಾಗ, ವಿರೋಧ ಪಕ್ಷಗಳು ಸದನದ ಬಾವಿಗಳಿದು ಘೋಷಣೆ ಕೂಗಲು ಪ್ರಾರಂಭಿಸಿದವು.  ಎಲ್ಲಾ ವಿಷಯದ ಬಗ್ಗೆಯೂ ಚರ್ಚೆಗೆ ಸರ್ಕಾರ ಸಿದ್ಧವಾಗಿದೆ ಎಂದ ಸಭಾಧ್ಯಕ್ಷರು, ಸಂಸತ್ತಿನ ಶಿಷ್ಟಾಚಾರದ ಪ್ರಕಾರ ಪ್ರತಿಭಟನಾ ನಿರತ ಸದಸ್ಯರ ನಡವಳಿಕೆ ಸೂಕ್ತವಲ್ಲ ಎಂದು ಅವರು ಹೇಳಿದರು.  ಗದ್ದಲದ ನಡುವೆ, ಲೋಕಸಭೆಯು ಗೋವಾ ರಾಜ್ಯದ ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರು ಹೊಂದಾಣಿಕೆ ಮಸೂದೆ-೨೦೨೪ ಅನ್ನು ಅಂಗೀಕರಿಸಿತು. ಸಭಾಧ್ಯಕ್ಷರು ಪದೇ ಪದೇ ಮನವಿ ಮಾಡಿದರೂ, ಪ್ರತಿಭಟನಾ ನಿರತ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದರು, ಇದರಿಂದಾಗಿ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಇದಕ್ಕೂ ಮೊದಲು, ಸದನವು ಜಾರ್ಖಂಡ್‌ನ ಮಾಜಿ ಮುಖ್ಯಮಂತ್ರಿ ಶಿಬು ಸೊರೆನ್, ಮಾಜಿ ಸಂಸದ ತಿಲಕ್‌ಧಾರಿ ಪ್ರಸಾದ್ ಸಿಂಗ್ ಮತ್ತು ರಾಮ್ ರತಿ ಬಿಂದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿತು. ರಾಜ್ಯಸಭೆಯಲ್ಲೂ ಇದೇ ರೀತಿಯ ಪರಿಸ್ಥಿತಿ ಕಂಡುಬಂತು. ಮಧ್ಯಾಹ್ನ ೨ ಗಂಟೆಗೆ ಸದನ ಮತ್ತೆ ಸಮಾವೇಶಗೊಂಡಾಗ, ವಿರೋಧ ಪಕ್ಷಗಳು ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯ ವಿಷಯದ ಕುರಿತು ಚರ್ಚೆಗೆ ಒತ್ತಾಯಿಸಿ ಪ್ರತಿಭಟನೆ ಆರಂಭಿಸಿದವು. ಉಪ ಸಭಾಪತಿ ಹರಿವಂಶ್, ಸಂಸತ್ ಸದಸ್ಯರಾಗಿ, ಸಂಸದೀಯ ಶಿಷ್ಟಾಚಾರ ಮತ್ತು ನಿಯಮಗಳನ್ನು ಪಾಲಿಸಬೇಕು ಎಂದು ಹೇಳಿದರು.  ಗದ್ದಲದ ನಡುವೆ, ರಾಜ್ಯಸಭೆಯು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಆರು ತಿಂಗಳ ಅವಧಿಗೆ ಧ್ವನಿ ಮತದೊಂದಿಗೆ ವಿಸ್ತರಿಸುವ ಬಗ್ಗೆ ಶಾಸನಬದ್ಧ ನಿರ್ಣಯವನ್ನು ಅಂಗೀಕರಿಸಿತು. ಗದ್ದಲದ ವಾತಾವರಣ ಮುಂದುವರೆದಂತೆ, ಸಭಾಪತಿಗಳು ದಿನದ ಮಟ್ಟಿಗೆ ಸದನವನ್ನು ಮುಂದೂಡಿದರು. ಇದಕ್ಕೂ ಮೊದಲು, ಬೆಳಿಗ್ಗೆ ಸದನ ಸೇರಿದಾಗ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ವಿರೋಧ ಪಕ್ಷಗಳ ಪರವಾಗಿ ಉಪ ಸಭಾಪತಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು. ಸದನದ ಬಾವಿಯೊಳಗೆ ಪ್ರತಿಪಕ್ಷಗಳ ಪ್ರತಿಭಟನೆಯ ಸಮಯದಲ್ಲಿ ಸಿಐಎಸ್‌ಎಫ್ ಸಿಬ್ಬಂದಿ ಇರುವಿಕೆಯನ್ನು ಅವರು ಪ್ರಶ್ನಿಸಿದರು. ಈ ಆರೋಪಗಳನ್ನು ನಿರಾಕರಿಸಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಮಾರ್ಷಲ್ ಮಾತ್ರ ಸದನವನ್ನು ಪ್ರವೇಶಿಸಬಹುದು ಎಂಬುದು ದಾಖಲೆಯಲ್ಲಿ ಸ್ಪಷ್ಟವಾಗಿದೆ ಎಂದು ಹೇಳಿದರು.  ಇದಕ್ಕೂ ಮುನ್ನ ಸದನವು ಮೇಲ್ಮನೆಯ ಮಾಜಿ ಸದಸ್ಯ ಪ್ರವೀಣ್ ನಾಯಕ್ ಅವರಿಗೆ ಗೌರವ ಸಲ್ಲಿಸಿತು.

**<><*<><>*><>**

ಭಾರತ ಮತ್ತು ಫಿಲಿಪೈನ್ಸ್ ಇಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ರೊಮುವಾಲ್ಡೆಜ್ ಮಾರ್ಕೋಸ್ ಜೂನಿಯರ್ ಸಮ್ಮುಖದಲ್ಲಿ ಒಂಬತ್ತು ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡವು. ಈ ಒಪ್ಪಂದಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆ, ಅಪರಾಧ ವಿಷಯದಲ್ಲಿ ಪರಸ್ಪರ ಕಾನೂನು ಸಹಾಯದ ಒಪ್ಪಂದ, ರಕ್ಷಣೆ, ವಿಜ್ಞಾನ ಮತ್ತು ತಂತ್ರಜ್ಞಾನಗಳು ಸೇರಿವೆ. ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಫಿಲಿಪೈನ್ಸ್ ತಮ್ಮ ರಾಜತಾಂತ್ರಿಕ ಸಂಬಂಧಗಳ ೭೫ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಫಿಲಿಪೈನ್ಸ್ ಅಧ್ಯಕ್ಷರ ಭೇಟಿ ವಿಶೇಷ ಮಹತ್ವದ್ದಾಗಿದೆ. ಎರಡೂ ರಾಷ್ಟ್ರಗಳ ನಡುವಿನ ಸಂಬಂಧ ಪ್ರಾಚೀನ ಕಾಲದಿಂದಲೂ ಇದೆ ಎಂದು ಹೇಳಿದರು. ಪಹಲ್ಗಾಮ್ ದಾಳಿಯನ್ನು

ಬಲವಾಗಿ ಖಂಡಿಸಿದ್ದಕ್ಕಾಗಿ ಮತ್ತು ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದ ಜೊತೆ ನಿಂತಿದ್ದಕ್ಕಾಗಿ ಫಿಲಿಪೈನ್ಸ್ ಸರ್ಕಾರ ಮತ್ತು ಅಧ್ಯಕ್ಷರಿಗೆ ಪ್ರಧಾನಿ ಕೃತಜ್ಞತೆ ಸಲ್ಲಿಸಿದರು. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ನಿರಂತರವಾಗಿ ಹೆಚ್ಚುತ್ತಿದ್ದು, ೩ ಬಿಲಿಯನ್ ಡಾಲರ್‌ಗಳನ್ನು ದಾಟಿದೆ. ಭಾರತ-ಆಸಿಯಾನ್ ಮುಕ್ತ ವ್ಯಾಪಾರ ಒಪ್ಪಂದದ ಪರಿಶೀಲನೆಯನ್ನು ಆದಷ್ಟು ಬೇಗ ಪೂರ್ಣಗೊಳಿಸುವುದು ಆದ್ಯತೆಯಾಗಿರುತ್ತದೆ ಎಂದು ಅವರು ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೩ ಸೆಕೆಂಡ್ಸ್)**

**<><*<><>*><>**

ರಷ್ಯಾ ತನ್ನ ತೈಲ ವ್ಯಾಪಾರದ ಕುರಿತು ಭಾರತದ ವಿರುದ್ಧದ ಇತ್ತೀಚಿನ ಅಮೆರಿಕ ಬೆದರಿಕೆಗಳನ್ನು ತಿರಸ್ಕರಿಸಿದೆ. ಸಾರ್ವಭೌಮ ರಾಷ್ಟ್ರಗಳು ತಮ್ಮ ವ್ಯಾಪಾರ ಪಾಲುದಾರರನ್ನು ಸ್ವತಂತ್ರವಾಗಿ ಆಯ್ಕೆ ಮಾಡುವ ಹಕ್ಕನ್ನು ಹೊಂದಿವೆ ಎಂದು ಪ್ರತಿಪಾದಿಸಿದೆ. ಮಾಸ್ಕೋದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್, ಭಾರತದ ಮೇಲೆ ಒತ್ತಡ ಹೇರಿದ್ದಕ್ಕಾಗಿ ಅಮೆರಿಕವನ್ನು ಟೀಕಿಸಿದ್ದು, ಅಂತಹ ಕ್ರಮಗಳು ನ್ಯಾಯಸಮ್ಮತವಲ್ಲ ಎಂದು ಹೇಳಿದ್ದಾರೆ.  ರಾಷ್ಟ್ರೀಯ ಹಿತಾಸಕ್ತಿಗಳ ಆಧಾರದ ಮೇಲೆ ವ್ಯಾಪಾರ ಸಂಬಂಧಗಳನ್ನು ಮುಂದುವರಿಸುವ ಹಕ್ಕು ಪ್ರತಿಯೊಂದು ದೇಶಕ್ಕೂ ಇದೆ ಎಂದು ಒತ್ತಿ ಹೇಳಿದರು. ರಷ್ಯಾದ ತೈಲವನ್ನು ಖರೀದಿಸಿದಿ ಮತ್ತು ಮರುಮಾರಾಟ ಮಾಡುವ ಭಾರತದ ಮೇಲೆ ಸುಂಕವನ್ನು ಹೆಚ್ಚಿಸುವ ಕುರಿತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಎಚ್ಚರಿಕೆಯ ನಂತರ ರಷ್ಯಾ ಈ ಹೇಳಿಕೆ ನೀಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ  <>*><>**